ಫಲಾನುಭವಿಗಳು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗೆ ಮುಂಗಡವಾಗಿ ನೀಡಬೇಕಾಗಿರುತ್ತದೆ

1008 (1040) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಶಿವಮೊಗ್ಗ ತಾಲ್ಲೂಕು ಆಯನೂರಿನಲ್ಲಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ,

ಆ) ಇದ್ದಲ್ಲಿ, ಪ್ರಥಮ ದರ್ಜೆ ಕಾಲೇಜನ್ನು ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮವೇನು,

ಇ) ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಡಿ ಹೆಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಆಯನೂರಿನಲ್ಲಿ ಕಲಾ ಮತ್ತು ವಾಣಿಜ್ಯ ಸರ್ಕಾರಿ ಕಾಲೇಜನ್ನು ಪ್ರಾರಂಭಿಸಲು ಪರಿಶೀಲಿಸಲಾಗುತ್ತಿದೆ

ಇ) ಮೇಲಿನಂತೆ

1009 (1041) ಶ್ರೀ ಹಾಲಪ್ಪ ಹೆಚ್ (ಹೊಸನಗರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಸುವರ್ಣ ಗ್ರಾಮ ಯೋಜನೆಯನ್ನು ಗ್ರಾಮಗಳ ಜನಸಂಖ್ಯೆ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆಯೇ,

ಆ) ಮಲೆನಾಡಿನಲ್ಲಿ ಕಡಿಮೆ ಜನಸಂಖ್ಯೆ ಆಧಾರದ ಮೇಲೆ ಗ್ರಾಮಗಳನ್ನು ಆಯ್ಕೆ ಮಾಡಲಾಗಿದ್ದು, ಇವುಗಳನ್ನು ಯಾವ ರೀತಿ ಅಭಿವೃದ್ಧಿ ಪಡಿಸಲಾಗಿದೆ,

ಇ) ಉಳಿದ ಗ್ರಾಮಗಳನ್ನು (ಮಜಿರ) ಯಾವಾಗ ಅಭಿವೃದ್ಧಿಪಡಿಸಲಾಗುವುದು?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

ಅ) ಹೌದು

ಆ) ಇನ್ನೂ ಅಭಿವೃದ್ಧಿ ಕಾರ್ಯಕ್ರಮ ಆರಂಭವಾಗಿರುವುದಿಲ್ಲ